# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **786**
ಸದಸ್ಯರ ಹೆಸರು : **ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**
ಉತ್ತರಿಸುವ ದಿನಾಂಕ : **20/09/2022**
ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಯಾವುದೇ ಹೋಬಳಿ ಕೇಂದ್ರ ಅಥವಾ ಗ್ರಾಮ ಪಂಚಾಯಿತಿಯನ್ನು ಕೇಂದ್ರವನ್ನಾಗಿಸಿಕೊಂಡು ಹೊಸ ಪಟ್ಟಣ ಪಂಚಾಯಿತಿ ರಚನೆ ಮಾಡಲು ಇರಬೇಕಾದ ಅರ್ಹತೆ/ಮಾನ ದಂಡಗಳೇನು; (ಆದೇಶ ಸಹಿತ ವಿವರ ನೀಡುವುದು) | ಒಂದು ಪ್ರದೇಶವನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ–349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ:<br>• ಆ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು.<br>• ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು.<br>• ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ 50% ಕ್ಕಿಂತ ಕಡಿಮೆ ಇಲ್ಲದಿರುವುದು.<br>• ದಿನಾಂಕ:19/03/2015 ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದಂತೆ, 2011 ರ ಜನಗಣತಿಯನುಸಾರ 15,000 ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮಪಂಚಾಯತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಪರಿಗಣಿಸಲಾಗಿರುತ್ತದೆ.<br>• ಮೇಲ್ದರ್ಜೆಗೇರಿಸಲಾಗುವ ಪ್ರದೇಶದಲ್ಲಿ ತಾಲ್ಲೂಕು ಕೇಂದ್ರ ಕಾರ್ಯಸ್ಥಾನವು ಇದ್ದಲ್ಲಿ, ಆ ಪ್ರದೇಶವು 10,000 ಕ್ಕಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿದ್ದರೂ ಸಹ ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಲು ಅವಕಾಶವಿರುತ್ತದೆ. |
| ಆ | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ | ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕು ತ್ಯಾಮಗೊಂಡ್ಲು ಗ್ರಾಮ ಪಂಚಾಯಿತಿಯನ್ನು ಪಟ್ಟಣ |

| | | |
|---|---|---|
| | ತ್ಯಾಮಗೊಂಡ್ಲು ಗ್ರಾಮವು ಗ್ರಾಮ ಪಂಚಾಯಿತಿ ಮತ್ತು ಹೋಬಳಿ ಕೇಂದ್ರವಾಗಿದ್ದು, ಇದನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ; ಹಾಗಿದ್ದಲ್ಲಿ, ಈ ಪ್ರಸ್ತಾವನೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಸಲ್ಲಿಸಿರುವ ದಾಖಲೆಗಳನುಸಾರ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ-349 ರನ್ವಯ ಪರಿಶೀಲಿಸಿ, ಕ್ರಮವಹಿಸಲಾಗುತ್ತಿದೆ. |
| ಇ | ಈ ಗ್ರಾಮವು ಧಾರ್ಮಿಕ, ಶೈಕ್ಷಣಿಕ ಮತ್ತು ವಾಣಿಜ್ಯ ಕೇಂದ್ರವಾಗಿ ಬೆಳವಣಿಗೆ ಹೊಂದಿದ್ದು, ತ್ಯಾಮಗೊಂಡ್ಲು ಮತ್ತು ಇದರ ಅಕ್ಕಪಕ್ಕದಲ್ಲಿರುವ ಗ್ರಾಮಗಳನ್ನು ಸೇರಿಸಿಕೊಂಡು ತ್ಯಾಮಗೊಂಡ್ಲುವನ್ನು ಹೊಸ ಪಟ್ಟಣ ಪಂಚಾಯಿತಿಯನ್ನಾಗಿ ಘೋಷಣೆ ಮಾಡುವಂತೆ ಸಾರ್ವಜನಿಕರ ಒತ್ತಾಯವಿರುವುದರಿಂದ, ಈ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | |

**ಸಂಖ್ಯೆ:ನಅಇ 47 ಎಲ್‌ಸಿಕ್ಯೂ 2022.**

(ಎನ್. ನಾಗರಾಜು (ಎಂ ಟಿ ಬಿ))

**ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು**